ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 22/7/2020

# ಶಾಸಕ ಗೌರಿಶಂಕರ್ ವಿರುದ್ಧ ಎಫ್ಐಆರ್

22/7/20

ತುಮಕೂರು: ಸರ್ಕಾರಿ ಶಾಲೆ ಮಕ್ಕಳಿಗೆ ಕಳೆದ ವಿಧಾನಸಭಾ ಚುನಾವಣೆ ವೇಳೆ ವಿತರಿಸಿದ್ದ ಗುಂಪು ವಿಮಾ ಪಾಲಿಸಿ ನಕಲಿ ಎಂದು ವ್ಯಕ್ತಿಯೊಬ್ಬರು ನೀಡಿದ ದೂರಿನ ಆಧಾರದ ಮೇಲೆ ತುಮಕೂರು ಗ್ರಾಮಾಂತರ ಜೆಡಿಎಸ್ ಶಾಸಕ ಗೌರಿಶಂಕರ್ ವಿರುದ್ಧ ಎಫ್ಐಆರ್ ದಾಖಲಾಗಿದೆ.



ರಮೇಶ್ ಬೆಟ್ಟಯ್ಯ ಎಂಬುವರು ನೀಡಿದ್ದ ದೂರಿನ ಮೇಲೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೂರುದಾರರು ತಮ್ಮ ದೂರಿನಲ್ಲಿ ಪಾಲಿಸಿ ನಕಲಿಯಾಗಿರುವುದರಿಂದ ಇದು ಸರ್ಕಾರಿ ಶಾಲೆ ಮಕ್ಕಳಿಗೆ ಮಾಡಿದ ವಂಚನೆ. ಈ ಯೋಜನೆ ಹಿಂದೆ ದುರುದ್ದೇಶ ಅಡಗಿದೆ ಎಂದು ಆರೋಪಿಸಿದ್ದರು. ಜತೆಗೆ, 15 ಸಾವಿರಕ್ಕೂ ಹೆಚ್ಚು ಮಕ್ಕಳಿಗೆ ವಿತರಿಸಿರುವ ಪಾಲಿಸಿಗಳೆಲ್ಲಾ ಒಂದೇ ಸಂಖ್ಯೆಯನ್ನು ಹೊಂದಿದೆ. ಈ ಕಾರಣದಿಂದಾಗಿ ಮಕ್ಕಳಿಗೆ ವಿತರಿಸಿದ್ದ ವಿಮೆ ರದ್ದುಪಡಿಸಲಾಗಿದೆ ಎನ್ನಲಾಗಿದೆ. ವಿಮೆ ರದ್ದಾಗಿದ್ದಕ್ಕೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಸಕರ ಜೊತೆ ಕಂಪನಿಯ ವಿಭಾಗೀಯ ವ್ಯವಸ್ಥಾಪಕರ ವಿರುದ್ಧವೂ ಎಫ್ಐಆರ್ ದಾಖಲಾಗಿದೆ.